# ಹಿರಿಯ ಸಿವಿಲ್ ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ಹಿರಿಯೂರು

## ಸಿ.ಸಿ ನಂ.899/2020

| | | | |
|---|---|---|---|
| ಸಾಕ್ಷಿದಾರರ ಹೆಸರು | – ಶಿವಾನಂದ | | ಸಿಡಬ್ಲ್ಯೂ-11 |
| ತಂದೆಯ ಹೆಸರು | – ಶಂಕರ್ ರಾವ್ | | ಪಿಡಬ್ಲ್ಯೂ-7 |
| ವಯಸ್ಸು | – 46 | ವರ್ಷ | |
| ಉದ್ಯೋಗ | – - | | |
| ವಾಸ | – ಬೀದರ್ | | |

ದಿನಾಂಕಃ 04.05.2026 ರಂದು ಸಾಕ್ಷಿಯನ್ನು ಕರೆಸಲಾಯಿತು ಮತ್ತು ಪ್ರಮಾಣ ವಚನ ಬೋಧಿಸಲಾಯಿತು.

**ಸಾಕ್ಷಿದಾರರ ಮುಖ್ಯ ವಿಚಾರಣೆಃ ಮಾನ್ಯ ಸ ಸ ಅ ರವರಿಂದ**

ನನ್ನ ಮಾಲೀಕತ್ವಕ್ಕೆ ಸಂಬಂಧಿಸಿದ ಕೆಎ 38 4167 ಲಾರಿ ಇದೆ. ಸದರಿ ಲಾರಿ 2019 ರಲ್ಲಿ ಅಪಘಾತವಾಗಿದೆ ಎಂದು ಪೊಲೀಸರು ತಿಳಿಸಿರುತ್ತಾರೆ. ಪೊಲೀಸರು ನನಗೆ ಅಪಘಾತಕ್ಕೆ ಸಂಬಂಧಿಸಿದಂತೆ ನೋಟೀಸ್ ನೀಡಿರುತ್ತಾರೆ. ಸಾಕ್ಷಿ ನೋಟೀಸ್ ನಿಪಿ-8 ರಲ್ಲಿರುವ ಸಹಿ ನೋಡಿ ಗುರುತಿಸಿದ್ದು ಸಹಿಯನ್ನು ನಿಪಿ-8(ಬಿ) ಎಂದು ಗುರುತಿಸಲಾಯಿತು. ನೋಟೀಸ್ ಗೆ ಉತ್ತರವನ್ನು ನೀಡಿದ್ದೇನೆ. ಸದರಿ ಉತ್ತರದಲ್ಲಿರುವ ಸಹಿ ನೋಡಿ ಗುರುತಿಸಿದ್ದು ಸಹಿಯನ್ನು ನಿಪಿ-9(ಬಿ) ಎಂದು ಗುರುತಿಸಲಾಯಿತು. ಅಪಘಾತದ ಸಮಯದಲ್ಲಿ ಆರೋಪಿ ಲಾರಿಯನ್ನು ಚಾಲನೆ ಮಾಡುತ್ತಿದ್ದರು. ಉತ್ತರದಲ್ಲಿ ಈ ವಿಚಾರವನ್ನು ಹೇಳಿರುವುದಿಲ್ಲ. ಸಾಕ್ಷಿ ಮುಚ್ಚಳಿಕೆಯಲ್ಲಿರುವ ಸಹಿ ನೋಡಿ ಗುರುತಿಸಿದ್ದು ಅದನ್ನು ನಿಪಿ-10(ಬಿ) ಎಂದು ಗುರುತಿಸಲಾಯಿತು. ನಿಪಿ-10 ಕ್ಕೆ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿದ್ದೇನೆ. ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ. ಈ ದಿನ ಆರೋಪಿ ಗೈರು ಹಾಜರು ಆರೋಪಿ ಪರ ವಕೀಲರು ವಿನಾಯತಿ ಅರ್ಜಿ ಸಲ್ಲಿಸಿ ಆರೋಪಿ ಗುರುತಿನ ಬಗ್ಗೆ ತಕರಾರು ಇಲ್ಲ ಎಂದು ನುಡಿದಿತರುತ್ತಾರೆ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಮತ್ತು ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಸ ಸ ಅಭಿಯೋಜಕರು ಕೋರಿದ್ದರಿಂದ ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಮಾನ್ಯ ಸ ಸ ಅ ರವರಿಂದಃ**

02.05.2019 ರಂದು ಪೊಲೀಸರು ನೋಟೀಸ್ ನೀಡಿರುತ್ತಾರೆ. ಎಂದರೆ ಸರಿ . ಉತ್ತರದಲ್ಲಿ ಆರೋಪಿ ಮೆಹಬೂಬ್ ಸಾಬ್ ವಾಹನ ಚಾಲನೆ ಮಾಡುತ್ತಿದ್ದರು ಎಂದು ಹೇಳಿದ್ದೇನೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿತರ ಪರ ಶ್ರೀ ಸಿ ಕೆ ವಕೀಲರಿಂದ–**

ಅಪಘಾತ ಯಾರ ತಪ್ಪಿನಿಂದ ಆಗಿದೆ ಎಂದು ನನಗೆ ಗೊತ್ತಿಲ್ಲ ಎಂದರೆ ನಿಜ. ನೋಟೀಸ್ ನಲ್ಲಿ ಏನು ಬರೆಯಲಾಗಿದೆ ಎಂದು ನನಗೆ ಗೊತ್ತಿಲ್ಲ ಎಂದರೆ ನಿಜ. ಮೆಹಬೂಬ್ ಸಾಬ್ ರವರೇ ಆ ದಿನ ವಾಹನ ಚಾಲನೆ ಮಾಡುತ್ತಿದ್ದರು ಎಂದು ನನಗೆ ಖಚಿತವಾಗಿ ಮಾಹಿತಿ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯು ಹೇಳಿದ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು )

ಓ ಹೇ ಕೇ ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ ಎಂ ಎಫ್ ಸಿ , ಹಿರಿಯೂರು